# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿನ ಪ್ರಶ್ನೆಸಂಖ್ಯೆ : 675**

**ಸದಸ್ಯರ ಹೆಸರು : ಶ್ರೀ ಯು. ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು)**

**ಉತ್ತರಿಸಬೇಕಾದ ದಿನಾಂಕ : 21.02.2024**

**ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು**

| ಪ್ರಶ್ನೆ | ಉತ್ತರ |
|---|---|
| ಅ) ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಘೋಷಿಸಿರುವ ಬರಪೀಡಿತ ತಾಲ್ಲೂಕುಗಳ ಸಂಖ್ಯೆ ಎಷ್ಟು; | ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯ ಬರ ನಿರ್ವಹಣೆ ಕೈಪಿಡಿ-2020ರನ್ವಯ 2023ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ರಾಜ್ಯದ 223 ತಾಲ್ಲೂಕುಗಳನ್ನು (196 ತೀವ್ರ ಬರ & 27 ಸಾಧಾರಣ ಬರ) ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ. |
| ಆ) ಈ ಬರಪೀಡಿತ ತಾಲ್ಲೂಕುಗಳ ರೈತರಿಗೆ ರಾಜ್ಯ ಸರ್ಕಾರ ಬಿಡುಗಡೆ ಮಾಡಿರುವ ಬೆಳೆ ಪರಿಹಾರದ ಮೊತ್ತವೆಷ್ಟು; | ಕೇಂದ್ರ ಸರ್ಕಾರದಿಂದ NDRF ಅನುದಾನವನ್ನು ನಿರೀಕ್ಷಿಸಿ ರಾಜ್ಯ ವಿಪತ್ತು ಪರಿಹಾರ ನಿಧಿ (SDRF) ಮಾರ್ಗಸೂಚಿಯನ್ವಯ ಬೆಳೆ ಹಾನಿ ಪರಿಹಾರದ ಮೊದಲನೇ ಕಂತಾಗಿ / ಬೆಳೆ ಹಾನಿ ಪರಿಹಾರವಾಗಿ ಅರ್ಹತೆಯ ಅನುಗುಣವಾಗಿ ಗರಿಷ್ಟ 2 ಹೆಕ್ಟೇರಿಗೆ ಸೀಮಿತಗೊಳಿಸಿ ನಿಯಾಮನುಸಾರ ಪ್ರತಿ ಅರ್ಹ ರೈತರಿಗೆ ರೂ.2,000/- ರವರೆಗೆ ಪಾವತಿಸಲು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಯುಕ್ತರಿಗೆ ರೂ.685.00 ಕೋಟಿ ಬಿಡುಗಡೆಗೊಳಿಸಿದ್ದು, ಈ ಪೈಕಿ ದಿನಾಂಕ:12-02-2024ರವರೆಗೆ 33.09 ಲಕ್ಷ ಅರ್ಹ ರೈತರ ಆಧಾರ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ರೂ.628.03 ಕೋಟಿಗಳನ್ನು ನೇರವಾಗಿ ಡಿಬಿಟಿ ಮೂಲಕ ಜಮೆ ಮಾಡಲಾಗಿದೆ. |
| ಇ) ಬರ ಪರಿಹಾರ ಸಲುವಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಕೇಂದ್ರ ಸರ್ಕಾರ ಈವರೆಗೆ ಹಣ ಬಿಡುಗಡೆಗೊಳಿಸಿದೆಯೇ; | ಕೇಂದ್ರ ಸರ್ಕಾರದ SDRF ಮಾರ್ಗಸೂಚಿಯನುಸಾರ ರಾಜ್ಯದ ಬರ ನಿರ್ವಹಣೆಗಾಗಿ ರೂ. 18,171.44 ಕೋಟಿಗಳನ್ನು NDRFರಡಿ ಆರ್ಥಿಕ ನೆರವು ಕೋರಿ ಭಾರತ ಸರ್ಕಾರಕ್ಕೆ ಮೆಮೊರಾಂಡಮ್ ಸಲ್ಲಿಸಲಾಗಿದ್ದು, ಅನುದಾನ ನಿರೀಕ್ಷಿಸಲಾಗಿದೆ. |
| ಈ) ಬರ ಪರಿಹಾರ ನೆರವು ಸಲುವಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರದ ಹೆಸರಿನಲ್ಲಿ ಜಂಟಿ ಖಾತೆ ತೆರೆಯಬೇಕೆಂಬ ಬಗ್ಗೆ ಕೇಂದ್ರದ ಒತ್ತಾಯವಿದೆಯೇ; ಹಾಗಿದ್ದಲ್ಲಿ ಈ ಸಂಬಂಧ ರಾಜ್ಯ ಸರ್ಕಾರದ ನಿಲುವೇನು? | ಬರ ಪರಿಹಾರ ಮೊತ್ತವನ್ನು ಸ್ವೀಕರಿಸಲು ಕೇಂದ್ರ ಮತ್ತು ರಾಜ್ಯ ಜಂಟಿ ಖಾತೆ ತೆರೆಯಲು ಕೇಂದ್ರ ಸರ್ಕಾರದಿಂದ ಯಾವುದೇ ನಿರ್ದೇಶನ ರಾಜ್ಯ ಸರ್ಕಾರಕ್ಕೆ ಬಂದಿರುವುದಿಲ್ಲ. |

ಕಡತ ಸಂಖ್ಯೆ: ಕಂಇ 77 ಟಿಎನ್ಆರ್ 2024

**(ಕೃಷ್ಣ ಬೈರೇಗೌಡ)**

ಕಂದಾಯಸಚಿವರು